<u>ಕರ್ನಾಟಕ ವಿಧಾನ ಪರಿಷತ್ತು</u>

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಶಶೀಲ್ ಜಿ. ನಮೋಶಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1263

ಉತ್ತರಿಸಬೇಕಾದ ದಿನಾಂಕ : 08-03-2022

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳಾವವು; (ಈ ಸಾಲ ಯೋಜನೆಯ ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ರೈತರಿಗಾಗಿ ಇರುವ ವಿವಿಧ ಸಾಲ ಯೋಜನೆಗಳು ಹಾಗೂ ನಿಯಮಗಳ ಸಂಪೂರ್ಣ ಮಾಹಿತಿ ಕೆಳಗಿನಂತಿದೆ.<br>**1. ಕುಟುಂಬಕ್ಕೆ ರೂ.3.00 ಲಕ್ಷಗಳವರೆಗೆ ಶೂನ್ಯ ಬಡ್ಡಿ ದರದಲ್ಲಿ ಅಲ್ಪಾವಧಿ ಬೆಳೆ ಸಾಲ ಮತ್ತು ಪಶುಸಂಗೋಪನೆ/ಮೀನುಗಾರಿಕೆ ಉದ್ದೇಶಗಳಿಗೆ ದುಡಿಯುವ ಬಂಡವಾಳವಾಗಿ ರೂ.2.00 ಲಕ್ಷಗಳವರೆಗೆ ಶೂನ್ಯ ಬಡ್ಡಿದರದ ಸಾಲದ ಯೋಜನೆ:-** |
| ಆ) | ಈ ಯೋಜನೆಗಳಲ್ಲಿ ಸಹಾಯಧನ (ಸಬ್ಸಿಡಿ) ಹೊಂದಿದ ಯೋಜನೆಗಳಾವವು; ಈ ಯೊಜನೆಗಳ ರೂಪುರೇಷೆಗಳೇನು; (ಮಾಹಿತಿ ನೀಡುವುದು) | • ಈ ಯೋಜನೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ರೈತನು ಪಡೆದ ಬೆಳೆ ಸಾಲ/ಹೈನುಗಾರಿಕೆ/ ಮೀನುಗಾರಿಕೆ ಸಾಲಗಳಿಗೆ ಅನ್ವಯವಾಗುತ್ತದೆ.<br>• ಈ ಯೋಜನೆಯು ಒಬ್ಬ ಫಲಾನುಭವಿಗೆ ಗರಿಷ್ಠ ರೂ.2.00 ಲಕ್ಷಗಳಿಗೆ ನೀಡಿದ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ. ಒಂದು ಕುಟುಂಬಕ್ಕೆ ಬೆಳೆ ಸಾಲ, ಪಶುಸಂಗೋಪನೆ ಮತ್ತು ಮೀನುಗಾರಿಕೆ ದುಡಿಯುವ ಬಂಡವಾಳದ ಸಾಲ ಒಟ್ಟು ಸೇರಿ ರೂ.3.00 ಲಕ್ಷಗಳಿಗೆ ಮೀರತಕ್ಕದ್ದಲ್ಲ.<br>• ಬಡ್ಡಿ ಸಹಾಯಧನ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿ ನಿಗದಿಪಡಿಸಿದ ಸ್ಕೇಲ್ ಆಫ್ ಫೈನಾನ್ಸ್ ಗೆ ಮಾತ್ರ ಲಭಿಸುತ್ತದೆ.<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮರುಪಾವತಿಸಬೇಕು.<br>• ರೈತರಿಗೆ ಸಾಲ ಮತ್ತು ಸಹಾಯಧನವನ್ನು ಅವರು ಡಿಸಿಸಿ ಬ್ಯಾಂಕ್ ಹಾಗೂ ವಾಣಿಜ್ಯ ಬ್ಯಾಂಕ್ ನಲ್ಲಿ ಹೊಂದಿರುವ ಉಳಿತಾಯ ಖಾತೆ ಮೂಲಕವೇ ವಿತರಿಸತಕ್ಕದ್ದು, ಸಾಲ |

| | | |
|---|---|---|
| | | ಮತ್ತು ಸಹಾಯಧನವನ್ನು ಸಂಘಗಳ ಹಂತದಲ್ಲಿ ನಗದು ಮೂಲಕ ಪಾವತಿಸುವುದನ್ನು ನಿರ್ಬಂಧಿಸಲಾಗಿದೆ.<br><br>**2. ಕುಟುಂಬಕ್ಕೆ ರೂ.10.00 ಲಕ್ಷಗಳವರೆಗೆ ಮಧ್ಯಮಾವಧಿ/ದೀರ್ಘಾವಧಿ ಕೃಷಿ ಸಾಲಗಳನ್ನು ಶೇಕಡಾ 3 ರ ಬಡ್ಡಿ ದರದಲ್ಲಿ ವಿತರಿಸುವ ಯೋಜನೆ:**<br>• ಈ ಯೋಜನೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಪಿಕಾರ್ಡ್ ಬ್ಯಾಂಕ್ ಅಥವಾ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಲ್ಲಿ ರೈತನು ಪಡೆದ ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಹಾಗೂ ಕೃಷಿ ಸಂಬಂಧಿತ ಸಾಲಗಳಿಗೆ ಅನ್ವಯವಾಗುತ್ತದೆ.<br>• ನಬಾರ್ಡ್ ಗುರುತಿಸಿದ ಕೃಷಿ/ಕೃಷಿ ಸಂಬಂಧಿತ ಮಧ್ಯಮಾವಧಿ ಮತ್ತು ದೀರ್ಘಾವಧಿ ಸಾಲಗಳ ಪೈಕಿ ಲಘು ನೀರಾವರಿ, ಭೂ-ಅಭಿವೃದ್ಧಿ, ಕೃಷಿ ಯಾಂತ್ರೀಕರಣ, ಪ್ಲಾಂಟೇಷನ್ ಹಾಗೂ ತೋಟಗಾರಿಕೆ ಅಭಿವೃದ್ಧಿ, ಸಾವಯವ ಕೃಷಿ, ಪಶುಸಂಗೋಪನೆ ಹಾಗೂ ಹೈನುಗಾರಿಕೆ, ಮೀನು ಕೃಷಿ, ರೇಷ್ಮೆ ಕೃಷಿ, ಜೇನು ಸಾಕಾಣಿಕೆ ಉದ್ದೇಶಗಳಿಗೆ ರೈತರಿಗೆ ನೀಡಲಾಗುವ ಸಾಲಗಳಿಗೆ ಮಾತ್ರ ಅನ್ವಯವಾಗುತ್ತದೆ.<br>• ದ್ವಿಚಕ್ರ ವಾಹನ, ಜೀಪು, ಪಿಕಪ್ ವ್ಯಾನ್ ಹಾಗೂ ಇನ್ನು ಮುಂತಾದ ಯಾವುದೇ ಕೃಷಿ ಸಾಗಾಣಿಕೆಗೆ ಬಳಸುವ ವಾಹನ ಸಾಲಗಳಿಗೆ, ತೋಟದ ಮನೆ, ಗ್ರಾಮೀಣ ಗೋದಾಮುಗಳಿಗೆ, ದ್ವಿತೀಯ ಸಂಸ್ಕರಣೆ, ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ/ ಆಹಾರ ಸಂಸ್ಕರಣೆ, ಕೃಷಿ ಕ್ಲಿನಿಕ್‌ಗೆ ನೀಡುವ ಸಾಲಗಳಿಗೆ ಈ ಯೋಜನೆ ಅನ್ವಯವಾಗುವುದಿಲ್ಲ<br>• ರೈತನು ಸಂಘವು ನಿಗದಿಪಡಿಸಿದ ಗಡುವಿನ ದಿನಾಂಕದೊಳಗೆ ಅಸಲು ಮತ್ತು ಶೇ.3 ರ ಬಡ್ಡಿ ದರದಲ್ಲಿ ಮರುಪಾವತಿಸಬೇಕು. |
| ಇ) | ಈ ಸಾಲ ಯೋಜನೆಯ ಲಾಭ ಪಡೆಯಲು ರೈತರು ಅನುಸರಿಸಬೇಕಾದ ನಿಯಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಈ ಸಾಲ ಯೋಜನೆಯ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳು ಈ ಕೆಳಕಂಡಂತಿದೆ.<br>1. ರೈತರು ತಮ್ಮ ಸಾಲದ ಖಾತೆಗಳಲ್ಲಿ ತಪ್ಪದೇ ಆಧಾರ್ ಕಾರ್ಡ್‌ನ ನಕಲು ಪ್ರತಿಯನ್ನು ನೀಡುವುದರೊಂದಿಗೆ ಆಧಾರ್ ಕಾರ್ಡ್ ಬಳಕೆಯ ಘೋಷಣಾ ಪತ್ರವನ್ನು ನೀಡತಕ್ಕದ್ದು. |

| | | |
|---|---|---|
| | | 2. ರೈತನು ಎರಡು ಸಂಘದ ಕಾರ್ಯವ್ಯಾಪ್ತಿಯಲ್ಲಿ ಭೂಮಿಯನ್ನು ಹೊಂದಿದ್ದರೆ ಆದ್ಯತೆಯ ಮೇರೆಗೆ ರೈತನು ವಾಸಿಸುವ ವ್ಯಾಪ್ತಿಯ ಸಂಘದಲ್ಲಿ ಪಡೆದ ಸಾಲಗಳಿಗೆ ಮೊದಲು ಪಾವತಿಸಿ, ರೂ.3.00 ಲಕ್ಷದ ಮಿತಿಯಲ್ಲಿ ಇತರೆ ಸಂಘದ ವ್ಯಾಪ್ತಿಯಲ್ಲಿ ಪಡೆದ ಸಾಲಗಳಿಗೆ ಸಹಾಯಧನ ವಿತರಿಸತಕ್ಕದ್ದು,<br>3. ನಿಗದಿಪಡಿಸಿದ ಗಡುವು ದಿನಾಂಕದೊಳಗೆ ರೈತರು ಸಾಲ ಮರುಪಾವತಿಸಿದಲ್ಲಿ ಮಾತ್ರ ಕೇಂದ್ರ ಸರ್ಕಾರ ನೀಡುವ ಶೇ.3 ರ ಪ್ರೋತ್ಸಾಹಧನ ಹಾಗೂ ರಾಜ್ಯ ಸರ್ಕಾರದಿಂದ ನೀಡುವ ಶೇ.4 ರ ಬಡ್ಡಿ ಸಹಾಯಧನಕ್ಕೆ ಅರ್ಹರಾಗುತ್ತಾರೆ. |
| ಈ) | ರೈತರಿಗಾಗಿ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ; | ಇಲ್ಲ. |
| ಉ) | ಹಾಗಿದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ; ವಾಹನ ಸಾಲ ಯೋಜನೆಯಲ್ಲಿ ಸಬ್ಸಿಡಿ ನೀಡಲಾಗುತ್ತಿದೆಯೇ? (ಮಾಹಿತಿ ನೀಡುವುದು) | ಅನ್ವಯಿಸುವುದಿಲ್ಲ. |

**ಸಂಖ್ಯೆ : ಸಿಒ 85 ಸಿಎಲ್‌ಎಸ್ 2022**

(ಎಸ್. ಟಿ. ಸೋಮಶೇಖರ್)

ಸಹಕಾರ ಸಚಿವರು